# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103


ಸಂಖ್ಯೆ:ತುವಿ:ಶೈ.ವಿ:UG:2025–26/1285 ದಿನಾಂಕ:04.08.2025

## ಸುತ್ತೋಲೆ

ವಿಷಯ :2025–26ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರವೇಶಾನುಮೋದನೆಗೆ ಸಿದ್ದತೆ ಮಾಡಿಕೊಳ್ಳುವ ಕುರಿತು.

ಉಲ್ಲೇಖ: ವಿವಿ ಸುತ್ತೋಲೆ ಪತ್ರದ ಸಂಖ್ಯೆ: ತುವಿ:ಶೈ.ವಿ:UG:2025–26:/1189 ದಿನಾಂಕ:30.07.2025.

*****

ಮೇಲ್ಕಂಡ ಉಲ್ಲೇಖಿತ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಸಂಯೋಜಿತ/ ಘಟಕ/ ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸುವುದೇನೆಂದರೆ, ವಿಶ್ವವಿದ್ಯಾನಿಲಯದ 2025–26 ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿಗೆ ದಿನಾಂಕ:30.08.2025ರಂದು ಕೊನೆಯ ದಿನಾಂಕವಾಗಿದ್ದು, ಈ ಸಂಬಂಧ ದಿನಾಂಕ:01.09.2025ರಿಂದ ಪ್ರವೇಶಾನುಮೋದನೆ ಪ್ರಕ್ರಿಯೆ ಪ್ರಾರಂಭಿಸಲಾಗುವ ಹಿನ್ನೆಲೆಯಲ್ಲಿ ಪ್ರವೇಶ ಪಡೆದ ಎಲ್ಲಾ ವಿದ್ಯಾರ್ಥಿಗಳ ಮೂಲ ದಾಖಲಾತಿಗಳನ್ನು ಹಾಗೂ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ವಿಶ್ವವಿದ್ಯಾನಿಲಯಕ್ಕೆ ಪಾವತಿಸಿ ದೃಡೀಕೃತ ಚಲನ್ ಪ್ರತಿಯೊಂದಿಗೆ ಕೊನೆಯ ದಿನಾಂಕದೊಳಗೆ ವಿಶ್ವವಿದ್ಯಾನಿಲಯವು ಸೂಚಿಸಿರುವ ಅನುಬಂಧಗಳಲ್ಲಿ ಭರ್ತಿ ಮಾಡಿ ಸಲ್ಲಿಸುವುದು.

ಪ್ರಥಮ ವರ್ಷದ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಪ್ರವೇಶಾನುಮೋದನೆಗೆ ವಿಶ್ವವಿದ್ಯಾನಿಲಯವು ಆಹ್ವಾನಿಸಿದ ದಿನಾಂಕದಂದು ಮೂಲ ದಾಖಲಾತಿಗಳೊಂದಿಗೆ ಹಾಜರಾಗಿ ಪ್ರವೇಶಾನುಮೋದನೆ ಪಡೆಯತಕ್ಕದ್ದು. ಒಂದು ವೇಳೆ ವಿಶ್ವವಿದ್ಯಾನಿಲಯವು ನಿಗಧಿಪಡಿಸಿರುವ ದಿನಾಂಕದೊಳಗೆ ಪ್ರವೇಶಾನುಮೋದನೆ ಪಡೆಯದಿದ್ದಲ್ಲಿ ಕಾಲೇಜಿನ ಪ್ರಾಂಶುಪಾಲರೇ ನೇರವಾಗಿ ಜವಾಬ್ದಾರರಾಗಿರುತ್ತೀರಿ ಎಂದು ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

ಉಪಕುಲಸಚಿವರು
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ

ಗೆ

1. ಪ್ರಾಂಶುಪಾಲರುಗಳು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು
2. ಪ್ರಾಂಶುಪಾಲರುಗಳು ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿ:

ಕಛೇರಿ ಪ್ರತಿ.